ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.

ಸಂಖ್ಯೆ: ಸಿ7(8)/ಆರ್.ಟಿ.ಇ./ಶು.ಮ./ತಂತ್ರಾಂಶ/2019-20 ದಿನಾಂಕ: 10-08-2020

::ಸುತ್ತೋಲೆ::

ವಿಷಯ : 2019-20ನೇ ಸಾಲಿನ ಆರ್.ಟಿ.ಇ. ಶುಲ್ಕ ಮರುಪಾವತಿಗೆ ತಂತ್ರಾಂಶದ ಮೂಲಕ ಬೇಡಿಕೆ ಸಲ್ಲಿಸಲು ಅಂತಿಮ ದಿನಾಂಕವನ್ನು ವಿಸ್ತರಿಸಿರುವ ಬಗ್ಗೆ.

ಉಲ್ಲೇಖ : 1. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 05-06-2020

2. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 07-07-2020

&&&&&&

ವಿಷಯದನ್ವಯ ಉಲ್ಲೇಖ(2)ರಂತೆ ಸುತ್ತೋಲೆಯಂತೆ ಶಿಕ್ಷಣ ಹಕ್ಕು ಕಾಯ್ದೆ 2009ರ ಸೆಕ್ಷನ್ 12(1)(ಸಿ) ರಡಿ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ 2019-20ನೇ ಸಾಲಿನ ಶುಲ್ಕ ಮರುಪಾವತಿಗಾಗಿ ತಂತ್ರಾಂಶದ ಮೂಲಕ ಬೇಡಿಕೆ ಸಲ್ಲಿಸಲು ಅಂತಿಮ ದಿನಾಂಕ : 07-08-2020 ರವರಿಗೆ ವಿಸ್ತರಿಸಲಾಗಿತ್ತು.

ಆದರೂ ಬಹುತೇಕ ಶಾಲೆಗಳು 2019-20ರ ಪ್ರಥಮ ಮತ್ತು ದ್ವಿತೀಯ ಕಂತಿನ ಶುಲ್ಕ ಮರುಪಾವತಿಗೆ ಬೇಡಿಕೆ ಸಲ್ಲಿಸಿರುವುದಿಲ್ಲ. ಇಂತಹ ಶಾಲೆಗಳು ಬೇಡಿಕೆ ಸಲ್ಲಿಸಲು ಕೋರಿಕೆ ಮೇರೆಗೆ ಅಂತಿಮ ದಿನಾಂಕವನ್ನು 08-09-2020ರವರೆಗೆ ವಿಸ್ತರಿಸಲಾಗಿದೆ. ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ವೈಯಕ್ತಿಕ ಗಮನಹರಿಸಿ ಆನ್‌ಲೈನ್ ಮೂಲಕ ಬೇಡಿಕೆ ಸಲ್ಲಿಸದಿರುವ ಶಾಲೆಗಳಿಗೆ ಬೇಡಿಕೆ ಸಲ್ಲಿಸಲು ಸೂಚಿಸುವುದು.

ಶಾಲಾ ಹಂತದಿಂದ ಬಂದ ಬೇಡಿಕೆಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಮತ್ತು ಉಪನಿರ್ದೇಶಕರ ಹಂತದಲ್ಲಿ ಬಾಕಿ ಉಳಿಸಿಕೊಳ್ಳದೇ ಕೂಡಲೇ ಪರಿಶೀಲಿಸಿ ಇತ್ಯರ್ಥಪಡಿಸಿ, ಪೇ ಆರ್ಡರ್ ಜನರೇಟ್ ಆದ ಶಾಲೆಗಳಿಗೆ ಶುಲ್ಕ ಮರುಪಾವತಿ ಮೊಬಲಗನ್ನು ತುರ್ತಾಗಿ ಸಂದಾಯಿಸಲು ಕ್ರಮಕೈಗೊಳ್ಳಲು ಸೂಚಿಸಿದೆ.

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

10/8/2020

ಇವರಿಗೆ,

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ತಾಲ್ಲೂಕು/ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ
3. ಹಿರಿಯ ಸಹಾಯಕ ನಿರ್ದೇಶಕರು, ಇ ಆಡಳಿತ ಶಾಖೆ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ
4. ಹಿರಿಯ ಕಾರ್ಯಕ್ರಮಾಧಿಕಾರಿಗಳು/ಪ್ರೋಗ್ರಾಮರ್ಸ್, ಎಸ್.ಎ.ಟಿ.ಎಸ್. ವಿಭಾಗ, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ
5. ರಾಜ್ಯದ ಎಲ್ಲಾ ಅಲ್ಪ ಸಂಖ್ಯಾತವಲ್ಲದ ಅನುದಾನರಹಿತ ಖಾಸಗಿ ಶಾಲಾ ಮುಖ್ಯಸ್ಥರು/ಆಡಳಿತ ಮಂಡಳಿಯವರಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ

ಪ್ರತಿಗಳು,

1. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ಇವರಿಗೆ ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
4. ಕಛೇರಿ ಪ್ರತಿ.